ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕರ್ನಾಟಕ ಲೋಕಸೇವಾ ಆಯೋಗದಲ್ಲಿ 2017-18 ಸಾಲಿನಲ್ಲಿ FDA ಮತ್ತು SDA ಹುದ್ದೆಗಳ ನೇಮಕಾತಿ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) -

331 (425+428) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2017-18 ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಒಟ್ಟು ಎಷ್ಟು FDA ಮತ್ತು SDA ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿತ್ತು; (ವಿವರ ನೀಡುವುದು)

(ಆ) ಸದರಿ ಅಧಿಸೂಚನೆಗಳಂತೆ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ;

(ಇ) ಸದರಿ ನೇಮಕಾತಿಗೆ ಸಂಬಂಧಿಸದಂತೆ, ಇತ್ತೀಚೆಗೆ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಬಿಡುಗಡೆಗೊಳಿಸಿ, ಅಭ್ಯರ್ಥಿಗಳಿಗೆ ಇಲಾಖೆಗಳನ್ನು ಹಂಚಿಕೆಮಾಡಿ, ಸ್ಥಳ ನಿಯುಕ್ತಿಗೊಳಿಸಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಆಯ್ಕೆಯಾದ ಅಭ್ಯರ್ಥಿಗಳನ್ನು ಸ್ಥಳನಿಯುಕ್ತಿಗೊಳಿಸಿದ ನಂತರ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳದಂತೆ ತಡೆಹಿಡಿದಿರುವುದಕ್ಕೆ ಕಾರಣಗಳೇನು;

(ಉ) ಆರ್ಥಿಕ ಇಲಾಖೆಯು ಸಂಪನ್ಮೂಲ ಕ್ರೂಢೀಕರಣದ ಕಾರಣ ನೀಡಿದ್ದರೂ ಸಹ ಹಲವಾರು ಇಲಾಖೆಗಳು ನೇಮಕಾತಿಗಳನ್ನು ಮುಂದುವರೆಸಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ್ದು, ಕೆ. ಪಿ. ಎಸ್. ಸಿ ನಡೆಸಿರುವ 2017 ಸಾಲಿನ ಈಆಂ ಮತ್ತು Sಆಂ ಹುದ್ದೆಗಳ ನೇಮಕಾತಿ ಮಾತ್ರ ತಡೆಹಿಡಿಯಲು ಕಾರಣವೇನು;

(ಊ) ಸದರಿ ಆಯ್ಕೆಗೊಂಡ ಅಭ್ಯರ್ಥಿಗಳನ್ನು ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳಲು ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು?